ESTD : No. JRB/Cell.II/69/Regn-4876/77-78
Date : 09-12-1977

✆:080-26601442

# ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ

## THE BANGALORE CITY DIST. CO-OPERATIVE UNION LTD.,

' ಸಹಕಾರ ಭವನ ' ನಂ. 1/3, 3ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು–560 018

E-mail: bcdcu1977@gmail.com

**ಜೆ. ಮಂಜುನಾಥ್**
ಅಧ್ಯಕ್ಷರು

**ಕೃಷ್ಣಪ್ಪ ಕೆ.ಸಿ.**
ಉಪಾಧ್ಯಕ್ಷರು

**ಗೌತಮ್ ಹೆಚ್.ಎನ್.**
ಖಜಾಂಚಿ

---

ದಿನಾಂಕ: 10–01–2024

ಗೆ,

ಸಂಪಾದಕರು,
ಸಹಕಾರ ವಾರಪತ್ರಿಕೆ
ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ.,
ಬೆಂಗಳೂರು.

ಮಾನ್ಯರೇ,

ವಿಷಯ : ದಿನಾಂಕ 21 ಮತ್ತು 22 ಫೆಬ್ರವರಿ 2025 ರಂದು ಏರ್ಪಡಿಸಿದ ರಾಜ್ಯ ಮಟ್ಟದ ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವ ಬಗ್ಗೆ

****

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂದಿಸಿದಂತೆ ದಿನಾಂಕ 21 ಮತ್ತು 22 ಫೆಬ್ರವರಿ 2025 ರಂದು ಬಮೂಲ್ ಅಧಿಕಾರಿಗಳಿಗೆ ಏರ್ಪಡಿಸಿದ ರಾಜ್ಯ ಮಟ್ಟದ ಕಾರ್ಯಕ್ರಮದ ಪೋಟೊ ಮತ್ತು ವರದಿಯನ್ನು ತಯಾರಿಸಿ ಈ ಪತ್ರದೊಂದಿಗೆ ಲಗತ್ತಿಸಿದ್ದು ಕಾರಣ ಸದರಿ ವರದಿಯನ್ನು ತಮ್ಮ ಸಹಕಾರ ವಾರಪತ್ರಿಕೆಯಲ್ಲಿ ಪ್ರಕಟಪಡಿಸಬೇಕೆಂದು ಈ ಮೂಲಕ ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇನೆ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ
ಸಹಿ/–
ಮುಖ್ಯಕಾರ್ಯನಿರ್ವಹಣಾಧಿಕಾರಿ

<u>**ಪ್ರಕಟಣೆಗಾಗಿ**</u>

**ಬೆಂಗಳೂರು :** 'ಆಡು ಮುಟ್ಟದ ಸೊಪ್ಪಿಲ್ಲ, ಸಹಕಾರವಿಲ್ಲದ ಕ್ಷೇತ್ರವಿಲ್ಲ' ಎನ್ನುವ ಹಾಗೆ ಸಹಕಾರಿ ವ್ಯವಸ್ಥೆ ಪ್ರತಿಯೊಂದು ಕ್ಷೇತ್ರದಲ್ಲಿ ಹಾಸುಹೊಕ್ಕಾಗಿದೆ. ರೈತರಿಗೆ, ಹೈನುಗಾರರಿಗೆ, ಮಹಿಳೆಯರಿಗೆ, ಗ್ರಾಮೀಣರಿಗೆ, ಪಟ್ಟಣವಾಸಿಗಳಿಗೆ, ಉದ್ಯೋಗಸ್ಥರಿಗೆ ಮತ್ತು ಯುವಕರಿಗೆ ಸಹಕಾರಿ ವ್ಯವಸ್ಥೆ ಬೆನ್ನೆಲುಬಾಗಿದೆ. ವಿಶೇಷವಾಗಿ ರೈತರಿಗೆ ಮತ್ತು ಹೈನುಗಾರಿಗೆ ಆರ್ಥಿಕವಾಗಿ ಶಕ್ತಿಯನ್ನು ತುಂಬುವ ಕೆಲಸ ಸಹಕಾರ ಕ್ಷೇತ್ರದಿಂದ ಮಾತ್ರ ಸಾಧ್ಯವಾಗಿದೆ ಎಂದು ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಂಡಳದ ಅಧ್ಯಕ್ಷರಾದ ಶ್ರೀ ಜಿ.ಟಿ. ದೇವೇಗೌಡ ರವರು ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ಹಾಗೂ ಬೆಂಗಳೂರು ಸಹಕಾರ ಹಾಲು ಒಕ್ಕೂಟ ಇವರುಗಳ ಸಂಯುಕ್ತಾಶ್ರಯದಲ್ಲಿ 'ಬೆಂಗಳೂರು ಸಹಕಾರ ಹಾಲು ಒಕ್ಕೂಟದ ನಗರ ಜಿಲ್ಲೆಯ ಅಧಿಕಾರಿಗಳಿಗೆ' ಹಮ್ಮಿಕೊಳ್ಳಲಾದ ರಾಜ್ಯ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಮುಂದುವರೆದು ಮಾತನಾಡಿದ ಅವರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ಈ ರಾಜ್ಯದ ಸಹಕಾರ ಸಂಘಗಳ ಮಾತೃ ಸಂಸ್ಥೆಯಾಗಿದೆ. ರಾಜ್ಯದ 30 ಜಿಲ್ಲಾ ಸಹಕಾರ ಯೂನಿಯನ್‌ಗಳ ಮೂಲಕ ಸಹಕಾರ ಶಿಕ್ಷಣ, ತರಬೇತಿ ಹಾಗೂ ಪ್ರಚಾರದ ಕೆಲಸಗಳನ್ನು ಪರಿಣಾಮಕಾರಿಯಾಗಿ ನಡೆಸಿಕೊಂಡು ಬರುತ್ತಿದೆ. ಮಹಾಮಂಡಳ 50 ವರ್ಷಗಳಿಂದ ನಿರಂತರವಾಗಿ ದೇಶದಲ್ಲಿ ಏಕೈಕ ಸಹಕಾರ ವಾರಪತ್ರಿಕೆಯನ್ನು ಪ್ರಕಟಿಸುತ್ತಿದೆ. ಮಹಾಮಂಡಳ ರಾಜ್ಯದ ಸಹಕಾರ ಚಳುವಳಿಯ ಪ್ರಗತಿಗೆ ತನ್ನದೇ ಆದ ವಿಶೇಷ ಕೊಡುಗೆ ನೀಡುತ್ತಿದೆ ಎಂದರು.

ಬೆಂಗಳೂರು ಸಹಕಾರ ಹಾಲು ಒಕ್ಕೂಟದ ಅಧ್ಯಕ್ಷರಾದ ಶ್ರೀ ಹೆಚ್.ಪಿ. ರಾಜಕುಮಾರ್ ರವರು ಮಾತನಾಡಿ, ರೈತರು ಆರ್ಥಿಕವಾಗಿ ಬೆಳವಣಿಗೆ ಹೊಂದಲು ಹಾಲು ಉತ್ಪಾದಕರ ಸಹಕಾರ ಸಂಘಗಳ ಎಲ್ಲಾ ಸಿಬ್ಬಂದಿಗಳು ಪ್ರಾಮಾಣಿಕವಾಗಿ, ಪಾರದರ್ಶಕವಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ಸಾಧ್ಯ. ಈ ನಿಟ್ಟಿನಲ್ಲಿ ಬಮೂಲ್‌ನ ಅಧಿಕಾರಿಗಳ ಪಾತ್ರ ಬಹಳ ಮುಖ್ಯವಾಗಿದ್ದು, ಮಹಾಮಂಡಳ ಮತ್ತು ಒಕ್ಕೂಟವು ಕಾಲ ಕಾಲಕ್ಕೆ ಅವಶ್ಯವಿರುವ ಇಂತಹ ತೆರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು ಇದರ ಪ್ರಯೋಜನವನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಶ್ರೀ ಜೆ. ಮಂಜುನಾಥ್ ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ, ಬಮೂಲ್‌ನ ಅಧಿಕಾರಿಗಳು ಗ್ರಾಮೀಣ ಜನರೊಂದಿಗೆ ಕಾರ್ಯನಿರ್ವಹಿಸಬೇಕಾಗಿರುವುದರಿಂದ ಜನರಲ್ಲಿ ಹೈನುಗಾರಿಕೆ ಬಗ್ಗೆ ಅರಿವು ಮೂಡಿಸಿ ಉನ್ನತಿಗೊಂಡಲ್ಲಿ ಒಟ್ಟಾರೆ ಗ್ರಾಮೀಣಾಭಿವೃದ್ಧಿಗೆ ಆದ್ಯತೆ ನೀಡಿದಂತಾಗುತ್ತದೆ. ಅದ್ದರಿಂದ ಅಧಿಕಾರಿಗಳು ತಿಳುವಳಿಕೆ ಹೊಂದಿ ಈ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಲು ಇಂತಹ ತರಬೇತಿ ಶಿಬಿರಗಳಲ್ಲಿ ಪಾಲ್ಗೊಂಡು ಜ್ಞಾನರ್ಜನೆ ಪಡೆಯುವುದು ಅತ್ಯಾವಶ್ಯಕ ಎಂದು ತಿಳಿಸಿದರು. ಹೈನೋದ್ಯಮ ಕ್ಷೇತ್ರಕ್ಕೆ ಒಕ್ಕೂಟದ ವತಿಯಿಂದ ಮುಂದಿನ ದಿನಗಳಲ್ಲಿ ಇನ್ನೂ ಅನೇಕ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಮುಖ್ಯಅತಿಥಿಗಳಾಗಿ ಆಗಮಿಸಿದ್ದ ಬಮೂಲ್‌ನ ವೃತ್ತಿಪರ ನಿರ್ದೇಶಕರಾದ ಶ್ರೀ ಕೆ.ಎಂ. ಕೃಷ್ಣಯ್ಯರವರು ಮಾತನಾಡಿ, ಪ್ರಸ್ತುತ ಸಂದರ್ಭದಲ್ಲಿ ತರಬೇತಿ ಶಿಬಿರಗಳು ಅತ್ಯಾವಶ್ಯಕವಾಗಿದ್ದು, ನಾನೂ ಸಹ ನಮ್ಮ ತಾಲ್ಲೂಕಿನ ಎಲ್ಲಾ ಸಂಘಗಳ ಕಾರ್ಯದರ್ಶಿಗಳಿಗೆ, ಸದಸ್ಯರುಗಳಿಗೆ ತರಬೇತಿ ಶಿಬಿರಗಳನ್ನು ಮಹಾಮಂಡಳದ ವತಿಯಿಂದ ಕೊಡಿಸುತ್ತಾ ಬಂದಿರುತ್ತೇನೆ. ಆದರೆ ತರಬೇತಿ ಶಿಬಿರಗಳ ಪ್ರಯೋಜನ ಆಗಬೇಕು. ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟವು ಇಂತಹ ತರಬೇತಿ ಶಿಬಿರಗಳನ್ನು ಆಗಾಗ್ಗೆ ನಡೆಸಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರೊ॥ ಬಿ.ವಿ. ವೆಂಕಟೇಶಯ್ಯ ಡೀನ್ (ನಿವೃತ್ತ) ಹೈನು ವಿಜ್ಞಾನ ಮಹಾವಿದ್ಯಾಲಯ ಬೆಂಗಳೂರು ಇವರು "ಶುದ್ಧ ಹಾಲು ಉತ್ಪಾದನೆ ಮತ್ತು ಹಾಲಿನ ಗುಣಮಟ್ಟ, ಹಾಲಿನಿಂದ ಮೌಲ್ಯವರ್ಧಿತ ಉತ್ಪನ್ನಗಳ ಕುರಿತು " ವಿಷಯ ಕುರಿತು, ಶ್ರೀ ವೈ.ವಿ. ಗುಂಡೂರಾವ್ ಸಹಾಯಕ ಪ್ರಧಾನ ವ್ಯವಸ್ಥಾಪಕರು (ನಿವೃತ್ತ) ನಬಾರ್ಡ್, ಬೆಂಗಳೂರು ಇವರು "ಒತ್ತಡ ನಿರ್ವಹಣೆ ಮತ್ತು ಸಂವಹನ" ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಒಕ್ಕೂಟದ ನಿರ್ದೇಶಕರಾದ ಶ್ರೀ ಹೆಚ್.ಟಿ. ನಾಗೇಶ್‌ರವರು ಎಲ್ಲರನ್ನು ಸ್ವಾಗತಿಸಿದರು. ಖಜಾಂಚಿ ಶ್ರೀ ಹೆಚ್.ಎನ್. ಗೌತಮ್, ನಿರ್ದೇಶಕರುಗಳಾದ ಶ್ರೀ ಶ್ರೀನಿವಾಸ ಗೌಡ ವೈ, ಶ್ರೀ ಕೆ. ವಿಜಯಕುಮಾರ್, ಶ್ರೀ ಅಮರೇಶ್ ರೆಡ್ಡಿ, ಶ್ರೀಮತಿ ಫಾತಿಮಾ ಲಾರೆನ್ಸ್, ಶ್ರೀ ಪಿ.ಎಂ. ನಾಗರಾಜು ಶ್ರೀ ಎ. ಮೂರ್ತಿ ಗೌಡ, ರವರು ಉಪಸ್ಥಿತರಿದ್ದರು. ಒಕ್ಕೂಟದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಸವಿತಾ ಬಿಸನಾಳ ಕಾರ್ಯಕ್ರಮ ನಿರೂಪಿಸಿದರು, ಜಿಲ್ಲಾ ಸಹಕಾರ ಶಿಕ್ಷಕರಾದ ಶ್ರೀ ಮಂಜುನಾಥ ನಾಗತಾಣ, ವ್ಯವಸ್ಥಾಪಕರಾದ ಶ್ರೀ ಆರ್. ನಾಗರಾಜ್, ಸಿಬ್ಬಂದಿ ಮಾರುತಿ ಉಪಸ್ಥಿತರಿದ್ದರು. ಕೊನೆಯಲ್ಲಿ ಒಕ್ಕೂಟದ ನಿರ್ದೇಶಕರಾದ ಶ್ರೀ ಕೆ.ಎಸ್. ಚಾಮರಾಜು ರವರು ವಂದನಾರ್ಪಣೆ ಮಾಡಿದರು.

## ಸಹಕಾರ ಶಿಕ್ಷಣ ನಿಧಿ ಸಲ್ಲಿಕೆ

ಇದೇ ಸಂದರ್ಭದಲ್ಲಿ ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ಉತ್ತರ ತಾಲೂಕು, ಬೆಂಗಳೂರು ದಕ್ಷಿಣ ತಾಲೂಕು, ಬೆಂಗಳೂರು ಪೂರ್ವ ತಲೂಕು ಮತ್ತು ಆನೇಕಲ್ ತಾಲೂಕುಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಹಕಾರ ಶಿಕ್ಷಣ ನಿಧಿಯ ಚೆಕ್ಕುಗಳನ್ನು ಬೆಂಗಳೂರು ಸಹಕಾರ ಹಾಲು ಒಕ್ಕೂಟದ ಅಧ್ಯಕ್ಷರಾದ ಶ್ರಿ ಹೆಚ್.ಪಿ. ರಾಜಕುಮಾರ್ ರವರ ಮೂಖಾಂತರ ಕರ್ನಾಟಕ ರಾಜ್ಯ ಸಹಕಾರ ಮಹಾಂಡಳದ ಅಧ್ಯಕ್ಷರಾದ ಶ್ರೀ ಜಿ.ಟಿ. ದೇವೇಗೌಡ ರವರಿಗೆ ನೀಡಿದರು.


ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು